ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಮಂಗಳವಾರ, ದಿನಾಂಕ : 23ನೇ ಜುಲೈ, 2019

01-08-2008 ರ ನಂತರ ನೇಮಕಾತಿಯಾದ ಶಿಕ್ಷಕ / ಉಪನ್ಯಾಸಕರಿಗೆ ವೇತನ ಬಡ್ತಿ ನೀಡುವ ಬಗ್ಗೆ

ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು):-

485 (709) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ದಿ : 01-08-2008 ರ ನಂತರ ನೇಮಕವಾದ ಪ್ರೌಢಶಾಲಾ ಸಹ ಶಿಕ್ಷಕರು, ಮುಖ್ಯೋಪಾದ್ಯಾಯರು, ಉಪನ್ಯಾಸಕರು ಹಾಗೂ ಪ್ರಾಚಾರ್ಯರಿಗೆ ಕುಮಾರ್ ನಾಯಕ್ ವರದಿಯನ್ವಯ ಒಂದು ವಿಶೇಷ ವೇತನ ಬಡ್ತಿಯನ್ನು ನೀಡಲಾಗಿದೆಯೇ; ನೀಡಿದ್ದರೆ, ಯಾವಾಗ ಯಾರು ಯಾರಿಗೆ ನೀಡಲಾಗಿದೆ; (ವಿವರ ನೀಡುವುದು)

(ಆ) ನೀಡದಿದ್ದಲ್ಲಿ, ಅದಕ್ಕೆ ಕಾರಣವೇನು : (ವಿವರ ನೀಡುವುದು)

(ಇ) ಯಾವ ಸಮಯ ಮಿತಿಯ ಒಳಗೆ ಇವರಿಗೆ ಆ ವೇತನ ಬಡ್ತಿಯನ್ನು ನೀಡಿ ಸಮಸ್ಯೆ ಬಗೆಹರಿಸಲಾಗುವುದು ?